**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಬೀದರ**

**ಅಧಿಸೂಚನೆ ಸಂಖ್ಯೆ 451/2023 ದಿನಾಂಕ 07/11/2023**

ವಿಷಯ: ಬೀದರ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು ಗ್ರೇಡ್ - 3 ಹುದ್ದೆಗಳ ನೇರ ನೇಮಕಾತಿ ಕುರಿತು

ಉಲ್ಲೇಖ : 1) ಸರಕಾರದ ಆದೇಶಗಳ ಸಂಖ್ಯೆ: ಲಾ 137 ಎಲ್.ಸಿ.ಇ 2014 ದಿನಾಂಕ 26/03/2015 ಮತ್ತು ಲಾ 81 ಎಲ್.ಸಿ.ಇ 2018 ದಿನಾಂಕ 13/06/2019

2) ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಪತ್ರಗಳ ಸಂಖ್ಯೆ: ಎಲ್.ಸಿ.ಎ-2 128/2012, ದಿನಾಂಕ: 13/02/2017 ಮತ್ತು 18/09/2019

3) ಈ ಕಚೇರಿ ಟಿಪ್ಪಣಿ ದಿನಾಂಕ: 07/11/2023 ಮತ್ತು ಅದರಂತೆ ಆದೇಶ.

* * *

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಆರಂಭ ದಿನಾಂಕ | 07/11/2023 |
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ | 06/12/2023 ಸಮಯ ರಾತ್ರಿ 11.59 ಗಂಟೆಯವರೆಗೆ |
| ಶುಲ್ಕ ಪಾವತಿಸಲು ಕಡೆಯ ದಿನಾಂಕ | 07/12/2023 |

ಈ ಮೂಲಕ, ಬೀದರ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಉಳಿಕೆ ಮೂಲವೃಂದದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು ಗ್ರೇಡ್ - 3 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ಬೀದರ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲ ತಾಣವಾದ https://bidar.dcourts.gov.in/notice-category/recruitments/ ನಲ್ಲಿ ನೀಡಲಾದ ಲಿಂಕ್ ಮೂಲಕ ಮೇಲೆ ಹೇಳಿದ ದಿನಾಂಕಗಳ ಒಳಗಾಗಿ ಮಾತ್ರ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸತಕ್ಕದ್ದು.

ಆನ್‌ಲೈನ್ ಹೊರತುಪಡಿಸಿ ಖುದ್ದಾಗಿ, ಅಂಚೆ ಮೂಲಕ ಅಥವಾ ಇನ್ಯಾವುದೇ ರೀತಿಯಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಸ್ಟೆನೊಗ್ರಾಫರ್ ಗ್ರೇಡ್ - 3  ಒಟ್ಟು ಹುದ್ದೆಗಳು: 04**

ವೇತನ ಶ್ರೇಣಿ: 27650-650-29600-750-32600-850-36000-950-39800-1100-46400-1250-52650 ಹಾಗು ವಿಶೇಷ ಭತ್ಯೆ

| ಮೀಸಲಾತಿ | ಇತರೆ | ಮಹಿಳೆ | ಒಟ್ಟು |
|---|---|---|---|
| **ಸಾಮಾನ್ಯ ಅಭ್ಯರ್ಥಿ** | 01 | 01 | 02 |
| **ಪರಿಶಿಷ್ಟ ಜಾತಿ** | 01 | -- | 01 |
| **ಪರಿಶಿಷ್ಟ ಪಂಗಡ** | 01 | -- | 01 |
| **ಒಟ್ಟು** | **03** | **01** | **04** |

**ಸ್ಟೆನೊಗ್ರಾಫರ್ ಗ್ರೇಡ್ - 3 ಹುದ್ದೆಯ ವಿದ್ಯಾರ್ಹತೆ:**

1) ಅರ್ಜಿ ಸಲ್ಲಿಸಲು  ನಿಗದಿ ಪಡಿಸಿದ ಕಡೆಯ ದಿನಾಂಕದ ಒಳಗಾಗಿ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ. ಅಥವಾ ಮೂರು  ವರ್ಷದ ದಿಪ್ಲೋಮ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಮತ್ತು

2) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಗಳಲ್ಲಿ ಹಿರಿಯ ಶ್ರೇಣಿ ಶೀಘ್ರಲಿಪಿ ಮತ್ತು ಬೆರಳಚ್ಚು ಅಥವಾ ಡಿಪ್ಲೋಮಾ ವಾಣಿಜ್ಯ ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ, ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಸ್ಟೆನೊಗ್ರಾಫರ್ ಗ್ರೇಡ್ -3 ಹುದ್ದೆಗಳ ಆಯ್ಕೆಯ ವಿಧಾನ:**

1) ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳು  2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

2) ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು

45 ನಿಮಿಷಗಳಲ್ಲಿ ಬೆರಳಚ್ಚು ಯಂತ್ರ/ಕಂಪ್ಯೂಟರ್ ಮುಖಾಂತರ ಅನುಲಿಪಿ ಮಾಡುವ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ:**

ಸಾಮರ್ಥ್ಯ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

**ವಯೋಮಿತಿ:**

**ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು**

1) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

2) ಗರಿಷ್ಠ ವಯೋಮಿತಿ ಈ ಕೆಳಗಿನ ಕೋಷ್ಟಕದಂತೆ:

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| ಪ್ರವರ್ಗ 2 ಎ, 2 ಬಿ, 3 ಎ, 3 ಬಿ | 38 ವರ್ಷ |
| ಪರಿಶಿಷ್ಠ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 | 40 ವರ್ಷ |

**ವಯೋಮಿತಿ ಸಡಿಲಿಕೆ:**

1. ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

2. ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿಯಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ.

3. ವಿಧವೆಯರು, ಜೀತಕಾರ್ಮಿಕರು ಮತ್ತು ಅಂಗವಿಕಲರು ಸಕ್ಷಮ ಪ್ರಾಧಿಕಾರಿಗಳು ನೀಡುವ ಪ್ರಮಾಣ ಪತ್ರ ಹೊಂದಿದಲ್ಲಿ ವಯೋಮಿತಿಯಲ್ಲಿ ಗರಿಷ್ಠ 10 ವರ್ಷಗಳ ಸಡಿಲಿಕೆ ನೀಡಲಾಗುವುದು. ಜೀತ ಕಾರ್ಮಿಕರು ಎಂದರೆ Bonded Labor System (Abolition) Act 1976 (Central Act 19 of 1976) ಅಥವಾ Karnataka Bonded Labor System (Abolition) Ordinance 1975 ರ ಅಡಿಯಲ್ಲಿ ಮಾಡಲಾದ ನಿಯಮಗಳ ಮೇರೆಗೆ ಜೀತ ಕಾರ್ಮಿಕ ಪದ್ದತಿಯಿಂದ ಮುಕ್ತನಾದ ವ್ಯಕ್ತಿ.

4. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

5. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಸಿದ್ದರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

6. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕನಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

7. ಅಭ್ಯರ್ಥಿಗಳು ರಾಜ್ಯ ಸರಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದ ವರ್ಷಗಳು.

**<u>ಅಭ್ಯರ್ಥಿಗಳ ಶುಲ್ಕ ಸಲ್ಲಿಸುವ ವಿವರ:</u>**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2 ಎ, 2 ಬಿ, 3 ಎ, 3 ಬಿ | ರೂ. 200/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ -1 | ರೂ. 100/- |

1) ನಿಗದಿತ ಶುಲ್ಕವನ್ನು ಈ ನ್ಯಾಯಾಲಯದ ವೆಬ್‌ಸೈಟ್ ವಿಳಾಸ https://bidar.dcourts.gov.in/notice-category/recruitments/ ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಇಂಡಿಯಾದ State Bank Collect ಮೂಲಕ Online payment through Net Banking/Credit card/Debit card/UPI ಯಾವುದಾದರೂ ಒಂದು ಸೌಲಭ್ಯದ ಮೂಲಕ ಪಾವತಿಸತಕ್ಕದ್ದು.

**<u>ಸೂಚನೆ</u>**: ಮೇಲಿನ ವಿಧಾನಗಳನ್ನು ಹೊರತುಪಡಿಸಿ ಯಾವುದೇ ಡಿಡಿ, ಚಲನ್, ಪೋಸ್ಟ್‌ಲ್ ಆರ್ಡರ್, ಮನಿ ಆರ್ಡರ್‌ಗಳನ್ನು ಸ್ವೀಕರಿಸಲಾಗುವುದಿಲ್ಲ. ಹಾಗು ನಿಗದಿತ ಶುಲ್ಕವನ್ನು ಪಾವತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಅಭ್ಯರ್ಥಿಗಳು ಒಂದು ವೇಳೆ ಅರ್ಜಿ ಸಂಖ್ಯೆಯನ್ನು ತಪ್ಪಾಗಿ/ಹೊಂದಿಕೆಯಾಗದಂತೆ ನಮೂದಿಸಿದಲ್ಲಿ ಅಥವಾ ಯಾವುದೇ ಕಾರಣಕ್ಕೆ ಶುಲ್ಕ ಪಾವತಿಯಾಗದಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ಹೊಣೆಯಾಗಿರುವುದಿಲ್ಲ ಮತ್ತು ಈ ಕುರಿತು ಯಾವುದೇ ಸಂವಹನಕ್ಕೆ ಅವಕಾಶವಿರುವುದಿಲ್ಲ.

**<u>ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಭರ್ತಿ ಮಾಡುವ ಮೊದಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.</u>**

1) ಬೀದರ ಜಿಲ್ಲಾ ನ್ಯಾಯಾಲಯದ ಅಧಿಕೃತ ವೆಬ್‌ಸೈಟಿನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು **ದಿನಾಂಕ: 07/11/2023 ರಿಂದ ದಿನಾಂಕ: 06/12/2023 ಸಮಯ ರಾತ್ರಿ 11.59 ಗಂಟೆಯವರೆಗೆ** ಅವಕಾಶವಿರುತ್ತದೆ.

2) ಅರ್ಜಿಯಲ್ಲಿ ಸರಿಯಾಗಿ ಮಾಹಿತಿ ನೀಡದೆ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3) ಅಭ್ಯರ್ಥಿಗಳು ತಮ್ಮ ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗು ಇ-ಮೇಲ್ ಐಡಿಯನ್ನು ಹೊಂದಿದಲ್ಲಿ ನಮೂದಿಸುವುದು. ಒಂದು ವೇಳೆ ಎಸ್.ಎಮ್.ಎಸ್ ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ನೇಮಕಾತಿ ಪ್ರಾಧಿಕಾರಿಯು ಹೊಣೆಯಾಗುವುದಿಲ್ಲ.

4) ಅರ್ಹ ಅಭ್ಯರ್ಥಿಗಳಿಗೆ ಅರ್ಹತಾ ಪರೀಕ್ಷೆ/ಸಂದರ್ಶನದ ಬಗ್ಗೆ ಮಾಹಿತಿಯನ್ನು ಎಸ್.ಎಮ್ಎಸ್ ಅಥವಾ ಇ-ಮೇಲ್ ಮುಖಾಂತರ ಮಾತ್ರ ನೀಡಲಾಗುವುದು ಹಾಗು ಸದರಿ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ ಕರೆಯಲಾಗುವುದು. ಅರ್ಹತಾ ಪರೀಕ್ಷೆಗೆ/ಸಂದರ್ಶನದ ಬಗ್ಗೆ ಮಾಹಿತಿಯನ್ನು ಪತ್ರ ವ್ಯವಹಾರದ ಮುಖಾಂತರ ಮಾಡಲಾಗುವುದಿಲ್ಲ.

5) ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಗಿನ ಸೂಚನೆಗಳನ್ನು ಪಾಲಿಸತಕ್ಕದ್ದು.

ಅ. ಇತ್ತೀಚಿನ ಬಣ್ಣದ ಭಾವಚಿತ್ರವನ್ನು 5 ಸೆಂಟಿಮೀಟರ್ ಉದ್ದ X 3.6 ಸೆಂಟಿಮೀಟರ್ ಅಗಲವಿರಬೇಕು ಮತ್ತು 50 ಕೆ.ಬಿ. ಅಳತೆ ಮೀರಬಾರದು ಹಾಗು .ಜೆಪಿಜಿ ನಮೂನೆಯಲ್ಲಿರಬೇಕು. ಭಾವಚಿತ್ರದ ಮೇಲೆ ಸಹಿಯನ್ನು ಮಾಡಿರಬಾರದು.

ಆ. ಕಪ್ಪು/ನೀಲಿ ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 ಸೆಂಟಿಮೀಟರ ಉದ್ದ X 7.5 ಸೆಂಟಿಮೀಟರ ಅಗಲವಿರಬೇಕು) ಮತ್ತು 26 ಕೆ.ಬಿ. ಅಳತೆ ಮೀರಬಾರದು ಮತ್ತು .ಜೆಪಿಜಿ ನಮೂನೆಯಲ್ಲಿರಬೇಕು.

6) ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು ನಂತರ ಅರ್ಜಿಯನ್ನು ಹಾಗು ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇಟ್ಟುಕೊಳ್ಳಬೇಕು.

7) ಕೊನೆಯ ಘಳಿಗೆಯಲ್ಲಿ ಸರ್ವರ್ ಡೌನ್/ಮಂದಗತಿ ಆಗುವ ಸಾಧ್ಯತೆ ಇರುವುದರಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಒಮ್ಮೆ ಶುಲ್ಕ ಪಾವತಿಸಿದ ನಂತರ ಯಾವುದೇ ಕಾರಣಕ್ಕೆ ಹಿಂದಿರುಗಿಸಲಾಗುವುದಿಲ್ಲ.

8) ಸೇವಾ ನಿರತ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡುವ "ನಿರಾಕ್ಷೇಪಣಾ ಪ್ರಮಾಣಪತ್ರ"ವನ್ನು ಪಡೆದುಕೊಂಡಿರತಕ್ಕದ್ದು.

9) ಆನ್‌ಲೈನ್ ಅರ್ಜಿಗಳನ್ನು ಹೊರತುಪಡಿಸಿ ಇತರ ಯಾವುದೇ ಮೂಲಕ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಇರುವುದಿಲ್ಲ.

**ಇತರೆ ಸೂಚನೆಗಳು:**

10) ಅರ್ಹತಾ ಪರೀಕ್ಷೆಗೆ/ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ), ದ್ವಿತೀಯ ಪಿ.ಯು.ಸಿ, ಬೆರಳಚ್ಚು ಹಾಗು ಶೀಘ್ರಲಿಪಿ ಪರೀಕ್ಷೆಗಳ ಪ್ರಮಾಣ ಪತ್ರಗಳು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 371 (ಜೆ) ಪ್ರಮಾಣ ಪತ್ರ ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಅರ್ಜಿದಾರರು ಅರ್ಜಿಯಲ್ಲಿ ಸಲ್ಲಿಸಿದ ಮಾಹಿತಿಯು ಹಾಗು ದಾಖಲಾತಿಗಳು ಹೊಂದಾಣಿಕೆ ಆಗದಿದ್ದಲ್ಲಿ ಅಥವಾ ಸುಳ್ಳೆಂದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಮಾಡಲಾಗುವುದು ಹಾಗು ಅವರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

11) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ, ಪ್ರವರ್ಗ-1 ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2 ಎ, 2 ಬಿ, 3 ಎ ಮತ್ತು 3 ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಪಟ್ಟ ತಹಸೀಲ್ದಾರರಿಂದ ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಅರ್ಜಿ ಸಲ್ಲಿಸಬೇಕು.

12) ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977 ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು ಹಾಗು ಕಂಪ್ಯೂಟರ್ ಸಾಕ್ಷಾರತಾ ಪರೀಕ್ಷೆಗಳಲ್ಲಿ ಸೇವೆಗೆ ಸೇರಿದ ಮೂರು ತಿಂಗಳ ಒಳಗಾಗಿ ಶೇಕಡಾ 60 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ಉತ್ತೀರ್ಣರಾಗಬೇಕು.

13) ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಪರೀಕ್ಷೆ/ ಸ್ಕಿಲ್ ಟೆಸ್ಟ್ ನಡೆಸಲಾಗುವುದು (ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಅರ್ಹತಾ ಪರೀಕ್ಷೆಗೆ ಹಾಜರಾಗಬೇಕು). ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 5 ರಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಯಾವುದೇ ಅಭ್ಯರ್ಥಿಗೆ ಅರ್ಹತಾ ಪರೀಕ್ಷೆ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಅರ್ಹತಾ ಪರೀಕ್ಷೆಗೆ ಅರ್ಹರಲ್ಲ ಎಂದು ತಿಳಿಯತಕ್ಕದ್ದು ಮತ್ತು ಆ ಬಗ್ಗೆ ಯಾವುದೇ ಪತ್ರ ವ್ಯವಹಾರ ಮಾಡಲಾಗುವುದಿಲ್ಲ.

14) ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು ಹಾಗು ಸಂದರ್ಶನದ ಕರೆ ಯಾವ ಅಭ್ಯರ್ಥಿಗಳಿಗೆ ಬರುವುದಿಲ್ಲವೋ ಅವರು ಸಂದರ್ಶನಕ್ಕೆ ಅರ್ಹರಾಗಿಲ್ಲ ಎಂದು ತಿಳಿದುಕೊಳ್ಳಬೇಕು ಮತ್ತು ಈ ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

16) ಆಯ್ಕೆಯ ಸಂಬಂಧ ಅನರ್ಹರಾದ ಅಭ್ಯರ್ಥಿಗಳು ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಅವಕಾಶ ಇರುವುದಿಲ್ಲ.

17) ನೇಮಕಾತಿಯು ಸಂಪೂರ್ಣ ಪಾರದರ್ಶಕತೆಯಿಂದ ಕೂಡಿದ್ದು ಅಭ್ಯರ್ಥಿಗಳು ಯಾವುದೇ ಮದ್ಯವರ್ತಿಗಳ ಸಂಪರ್ಕಕ್ಕೆ ಅವಕಾಶ ಇರುವುದಿಲ್ಲ.

18) ಯಾವುದೇ ಅಭ್ಯರ್ಥಿಗಳು ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸುವುದು ಕಂಡು ಬಂದಲ್ಲಿ ಅಂತಹವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಮತ್ತು ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು.

VIJAYKUMR M ANANDASHETTI

Digitally signed by VIJAYKUMR M ANANDASHETTI
Date: 2023.11.07 17:45:25 +0530

ಸ್ಥಳ: ಬೀದರ

ದಿನಾಂಕ: 07/11/2023

(ವಿ. ಎಮ್. ಆನಂದಶೆಟ್ಟಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೀದರ

**ನಕಲನ್ನು ಗೌರವದೊಂದಿಗೆ ಮಾಹಿತಿಗಾಗಿ:**

ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಇವರಿಗೆ ಮುಖಪತ್ರದೊಂದಿಗೆ.

**ಪ್ರಕಟಣೆಯ ನಕಲನ್ನು ಪ್ರಕಟಿಸುವ ಕುರಿತು:**

1) ರಾಜ್ಯ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳು ಇವರುಗಳಿಗೆ ಇ-ಮೇಲ್ ಮುಖಾಂತರ
2) ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬೀದರ
3) ನಿರ್ದೇಶಕರು, ವಾರ್ತಾ ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು, ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55(ಬಿ) (ಡಿ) ಪ್ರಕಾರ ಹೆಚ್ಚು ಪ್ರಸಾರ ಉಳ್ಳ ಎರಡು ದಿನಪತ್ರಿಗಳಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.
4) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು -560059, ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಹೊರಡಿಸಲು
5) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ ಅಧಿಕಾರಿಗಳು, ಬೀದರ, ವ್ಯಾಪಕ ಪ್ರಚಾರಕ್ಕಾಗಿ
6) ಜಿಲ್ಲಾಧಿಕಾರಿಗಳು, ಬೀದರ ಜಿಲ್ಲೆ, ಬೀದರ

7) ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೀದರ ಜಿಲ್ಲೆ, ಬೀದರ

8) ಜಿಲ್ಲಾ ಖಜಾನಾ ಅಧಿಕಾರಿಗಳು, ಬೀದರ ಜಿಲ್ಲೆ, ಬೀದರ

9) ಬೀದರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಪೀಠಾಸೀನಾಧಿಕಾರಿಗಳಿಗೆ,

10) ಸದಸ್ಯ ಕಾರ್ಯದರ್ಶಿಗಳು, ಡಿ.ಎಲ್.ಎಸ್.ಎ, ಬೀದರ ಇವರ ಮಾಹಿತಿ ಹಾಗು ರಾಜ್ಯ ಮಟ್ಟದ ಪ್ರಚಲಿತ ಯಾವುದಾದರೂ ಎರಡು ದಿನಪತ್ರಿಕೆಗಳಲ್ಲಿ ಸುದ್ದಿ ಪ್ರಕಟಣೆ ಮಾಡಲು ವ್ಯವಸ್ಥೆ ಮಾಡುವಂತೆ ಮನವಿ

11) ಈ ನ್ಯಾಯಾಲಯದ ಸಾಫ್ಟವೇರ್ ಟೆಕ್ನಿಷಿಯನ್ ಇವರಿಗೆ ಸೂಕ್ತ ಕ್ರಮಕ್ಕಾಗಿ,

12) ನ್ಯಾಯಾಲಯದ ಸೂಚನಾ ಫಲಕಕ್ಕೆ.

13) ಆಡಳಿತ ವಿಭಾಗದ ಕಡತಕ್ಕೆ.

14) ಕಚೇರಿ ಪ್ರತಿ.

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಬೀದರ

## ಅಧಿಸೂಚನೆ ಸಂಖ್ಯೆ 450/2023 ದಿನಾಂಕ 07/11/2023

ವಿಷಯ: ಬೀದರ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ (ಸ್ಥಳೀಯ ವೃಂದ) ದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು ಗ್ರೇಡ್ - 3 ಹುದ್ದೆಗಳ ನೇರ ನೇಮಕಾತಿ ಕುರಿತು

ಉಲ್ಲೇಖ : 1) ಸರಕಾರದ ಆದೇಶಗಳ ಸಂಖ್ಯೆ: ಲಾ 137 ಎಲ್.ಸಿ.ಇ 2014 ದಿನಾಂಕ 26/03/2015 ಮತ್ತು ಲಾ 81 ಎಲ್.ಸಿ.ಇ 2018 ದಿನಾಂಕ 13/06/2019

2) ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಪತ್ರಗಳ ಸಂಖ್ಯೆ: ಎಲ್.ಸಿ.ಎ-2 128/2012, ದಿನಾಂಕ: 13/02/2017 ಮತ್ತು 18/09/2019

3) ಈ ಕಚೇರಿ ಟಿಪ್ಪಣಿ ದಿನಾಂಕ: 07/11/2023 ಮತ್ತು ಅದರಂತೆ ಆದೇಶ.

* * *

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಆರಂಭ ದಿನಾಂಕ | 07/11/2023 |
| ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ | 06/12/2023 ಸಮಯ ರಾತ್ರಿ 11.59 ಗಂಟೆಯವರೆಗೆ |
| ಶುಲ್ಕ ಪಾವತಿಸಲು ಕಡೆಯ ದಿನಾಂಕ | 07/12/2023 |

ಈ ಮೂಲಕ, ಬೀದರ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಕಲ್ಯಾಣ ಕರ್ನಾಟಕ (ಸ್ಥಳೀಯ ವೃಂದ) ದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು ಗ್ರೇಡ್ - 3 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಯನ್ನು ಬೀದರ ಜಿಲ್ಲಾ ನ್ಯಾಯಾಲಯದ ಅಧಿಕೃತ ಜಾಲ ತಾಣವಾದ https://bidar.dcourts.gov.in/notice-category/recruitments/ ನಲ್ಲಿ ನೀಡಲಾದ ಲಿಂಕ್ ಮೂಲಕ ಮೇಲೆ ಹೇಳಿದ ದಿನಾಂಕಗಳ ಒಳಗಾಗಿ ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು.

ಆನ್‌ಲೈನ್ ಹೊರತುಪಡಿಸಿ ಖುದ್ದಾಗಿ, ಅಂಚೆ ಮೂಲಕ ಅಥವಾ ಇನ್ಯಾವುದೇ ರೀತಿಯಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಸ್ಟೆನೊಗ್ರಾಫರ್ ಗ್ರೇಡ್ - 3 ಒಟ್ಟು ಹುದ್ದೆಗಳು: 05**

ವೇತನ ಶ್ರೇಣಿ: 27650-650-29600-750-32600-850-36000-950-39800-1100-46400-1250-52650 ಹಾಗು ವಿಶೇಷ ಭತ್ಯೆ

| ಮೀಸಲಾತಿ | ಇತರೆ | ಮಹಿಳೆ | ಒಟ್ಟು |
|---|---|---|---|
| ಸಾಮಾನ್ಯ ಅಭ್ಯರ್ಥಿ | 01 | 01 | 02 |
| ಪರಿಶಿಷ್ಟ ಜಾತಿ | 01 | -- | 01 |
| ಪರಿಶಿಷ್ಟ ಪಂಗಡ | 01 | -- | 01 |
| ಪ್ರವರ್ಗ -I | 01 | - | 01 |
| **ಒಟ್ಟು** | **04** | **01** | **05** |

**ಸ್ಟೆನೊಗ್ರಾಫರ್ ಗ್ರೇಡ್ - 3 ಹುದ್ದೆಯ ವಿದ್ಯಾರ್ಹತೆ:**

1) ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕಡೆಯ ದಿನಾಂಕದ ಒಳಗಾಗಿ ಅಭ್ಯರ್ಥಿಗಳು ದ್ವಿತೀಯ ಪಿ.ಯು.ಸಿ. ಅಥವಾ ಮೂರು ವರ್ಷದ ದಿಪ್ಲೋಮ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ಮತ್ತು

2) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಎರಡೂ ಭಾಷೆಗಳಲ್ಲಿ ಹಿರಿಯ ಶ್ರೇಣಿ ಶೀಘ್ರಲಿಪಿ ಮತ್ತು ಬೆರಳಚ್ಚು ಅಥವಾ ಡಿಪ್ಲೋಮಾ ವಾಣಿಜ್ಯ ಪರೀಕ್ಷೆ ಅಥವಾ ತತ್ಸಮಾನ ಪರೀಕ್ಷೆಯಲ್ಲಿ, ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

**ಸ್ಟೆನೊಗ್ರಾಫರ್ ಗ್ರೇಡ್ - 3 ಹುದ್ದೆಗಳ ಆಯ್ಕೆಯ ವಿಧಾನ:**

1) ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ತಿದ್ದುಪಡಿ) ನೇಮಕಾತಿ ನಿಯಮಗಳು 2007 ರ ಪ್ರಕಾರ ನೇಮಕಾತಿಯನ್ನು ನಡೆಸಲಾಗುವುದು.

2) ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು

45 ನಿಮಿಷಗಳಲ್ಲಿ ಬೆರಳಚ್ಚು ಯಂತ್ರ/ಕಂಪ್ಯೂಟರ್ ಮುಖಾಂತರ ಅನುಲಿಪಿ ಮಾಡುವ ಸಾಮರ್ಥ್ಯ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿ:**

ಸಾಮರ್ಥ್ಯ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 05 ಅಂಕಗಳನ್ನೊಳಗೊಂಡಿರುತ್ತದೆ.

**ವಯೋಮಿತಿ:**

**ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು**

1) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

2) ಗರಿಷ್ಠ ವಯೋಮಿತಿ ಈ ಕೆಳಗಿನ ಕೋಷ್ಟಕದಂತೆ:

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| ಪ್ರವರ್ಗ 2 ಎ, 2 ಬಿ, 3 ಎ, 3 ಬಿ | 38 ವರ್ಷ |
| ಪರಿಶಿಷ್ಠ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 | 40 ವರ್ಷ |

**ವಯೋಮಿತಿ ಸಡಿಲಿಕೆ:**

1. ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

2. ಮಾಜಿ ಸೈನಿಕರಿಗೆ ಗರಿಷ್ಠ ವಯೋಮಿತಿಯಲ್ಲಿ ಅವರು ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ.

3. ವಿಧವೆಯರು, ಜೀತಕಾರ್ಮಿಕರು ಮತ್ತು ಅಂಗವಿಕಲರು ಸಕ್ಷಮ ಪ್ರಾಧಿಕಾರಿಗಳು ನೀಡುವ ಪ್ರಮಾಣ ಪತ್ರ ಹೊಂದಿದಲ್ಲಿ ವಯೋಮಿತಿಯಲ್ಲಿ ಗರಿಷ್ಟ 10 ವರ್ಷಗಳ ಸಡಿಲಿಕೆ ನೀಡಲಾಗುವುದು. ಜೀತ ಕಾರ್ಮಿಕರು ಎಂದರೆ Bonded Labor System (Abolition) Act 1976 (Central Act 19 of 1976) ಅಥವಾ Karnataka Bonded Labor System (Abolition) Ordinance 1975 ರ ಅಡಿಯಲ್ಲಿ ಮಾಡಲಾದ ನಿಯಮಗಳ ಮೇರೆಗೆ ಜೀತ ಕಾರ್ಮಿಕ ಪದ್ದತಿಯಿಂದ ಮುಕ್ತನಾದ ವ್ಯಕ್ತಿ.

4. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಟ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

5. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಸಿದ್ದರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

6. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕನಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

7. ಅಭ್ಯರ್ಥಿಗಳು ರಾಜ್ಯ ಸರಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದ ವರ್ಷಗಳು.

**ಅಭ್ಯರ್ಥಿಗಳ ಶುಲ್ಕ ಸಲ್ಲಿಸುವ ವಿವರ:**

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ 2 ಎ, 2 ಬಿ, 3 ಎ, 3 ಬಿ | ರೂ. 200/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ -1 | ರೂ. 100/- |

1) ನಿಗದಿತ ಶುಲ್ಕವನ್ನು ಈ ನ್ಯಾಯಾಲಯದ ವೆಬ್‌ಸೈಟ್ ವಿಳಾಸ https://bidar.dcourts.gov.in/notice-category/recruitments/ ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಇಂಡಿಯಾದ State Bank Collect ಮೂಲಕ Online payment through Net Banking/Credit card/Debit card/UPI ಯಾವುದಾದರೂ ಒಂದು ಸೌಲಭ್ಯದ ಮೂಲಕ ಪಾವತಿಸತಕ್ಕದ್ದು.

**ಸೂಚನೆ**: ಮೇಲಿನ ವಿಧಾನಗಳನ್ನು ಹೊರತುಪಡಿಸಿ ಯಾವುದೇ ಡಿಡಿ, ಚಲನ್, ಪೋಸ್ಟ್ಲ್ ಆರ್ಡರ್, ಮನಿ ಆರ್ಡರ್‌ಗಳನ್ನು ಸ್ವೀಕರಿಸಲಾಗುವುದಿಲ್ಲ. ಹಾಗು ನಿಗದಿತ ಶುಲ್ಕವನ್ನು ಪಾವತಿಸದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

2) ಅಭ್ಯರ್ಥಿಗಳು ಒಂದು ವೇಳೆ ಅರ್ಜಿ ಸಂಖ್ಯೆಯನ್ನು ತಪ್ಪಾಗಿ/ಹೊಂದಿಕೆಯಾಗದಂತೆ ನಮೂದಿಸಿದಲ್ಲಿ ಅಥವಾ ಯಾವುದೇ ಕಾರಣಕ್ಕೆ ಶುಲ್ಕ ಪಾವತಿಯಾಗದಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ಹೊಣೆಯಾಗಿರುವುದಿಲ್ಲ ಮತ್ತು ಈ ಕುರಿತು ಯಾವುದೇ ಸಂವಹನಕ್ಕೆ ಅವಕಾಶವಿರುವುದಿಲ್ಲ.

**ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಭರ್ತಿ ಮಾಡುವ ಮೊದಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

1) ಬೀದರ ಜಿಲ್ಲಾ ನ್ಯಾಯಾಲಯದ ಅಧಿಕೃತ ವೆಬ್‌ಸೈಟಿನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೊಂದಾಯಿಸಲು **ದಿನಾಂಕ 07/11/2023 ರಿಂದ ದಿನಾಂಕ 06/12/2023 ಸಮಯ ರಾತ್ರಿ 11.59 ಗಂಟೆಯವರೆಗೆ** ಅವಕಾಶವಿರುತ್ತದೆ.

2) ಅರ್ಜಿಯಲ್ಲಿ ಸರಿಯಾಗಿ ಮಾಹಿತಿ ನೀಡದೆ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3) ಅಭ್ಯರ್ಥಿಗಳು ತಮ್ಮ ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗು ಇ-ಮೇಲ್ ಐಡಿಯನ್ನು ಹೊಂದಿದಲ್ಲಿ ನಮೂದಿಸುವುದು. ಒಂದು ವೇಳೆ ಎಸ್.ಎಮ್.ಎಸ್ ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ನೇಮಕಾತಿ ಪ್ರಾಧಿಕಾರಿಯು ಹೊಣೆಯಾಗುವುದಿಲ್ಲ.

4) ಅರ್ಹ ಅಭ್ಯರ್ಥಿಗಳಿಗೆ ಅರ್ಹತಾ ಪರೀಕ್ಷೆ/ಸಂದರ್ಶನದ ಬಗ್ಗೆ ಮಾಹಿತಿಯನ್ನು ಎಸ್.ಎಮ್ಎಸ್ ಅಥವಾ ಇ-ಮೇಲ್ ಮುಖಾಂತರ ಮಾತ್ರ ನೀಡಲಾಗುವುದು ಹಾಗು ಸದರಿ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ ಕರೆಯಲಾಗುವುದು. ಅರ್ಹತಾ ಪರೀಕ್ಷೆಗೆ/ಸಂದರ್ಶನದ ಬಗ್ಗೆ ಮಾಹಿತಿಯನ್ನು ಪತ್ರ ವ್ಯವಹಾರದ ಮುಖಾಂತರ ಮಾಡಲಾಗುವುದಿಲ್ಲ.

5) ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಗಿನ ಸೂಚನೆಗಳನ್ನು ಪಾಲಿಸತಕ್ಕದ್ದು.

ಅ. ಇತ್ತೀಚಿನ ಬಣ್ಣದ ಭಾವಚಿತ್ರವನ್ನು 5 ಸೆಂಟಿಮೀಟರ್ ಉದ್ದ X 3.6 ಸೆಂಟಿಮೀಟರ್ ಅಗಲವಿರಬೇಕು ಮತ್ತು 50 ಕೆ.ಬಿ. ಅಳತೆ ಮೀರಬಾರದು ಹಾಗು .ಜೆಪಿಜೆ ನಮೂನೆಯಲ್ಲಿರಬೇಕು. ಭಾವಚಿತ್ರದ ಮೇಲೆ ಸಹಿಯನ್ನು ಮಾಡಿರಬಾರದು.

ಆ. ಕಪ್ಪು/ನೀಲಿ ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 ಸೆಂಟಿಮೀಟರ ಉದ್ದ X 7.5 ಸೆಂಟಿಮೀಟರ ಅಗಲವಿರಬೇಕು) ಮತ್ತು 26 ಕೆ.ಬಿ. ಅಳತೆ ಮೀರಬಾರದು ಮತ್ತು .ಜೆಪಿಜೆ ನಮೂನೆಯಲ್ಲಿರಬೇಕು.

6) ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಈ ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು ನಂತರ ಅರ್ಜಿಯನ್ನು ಹಾಗು ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇಟ್ಟುಕೊಳ್ಳಬೇಕು.

7) ಕೊನೆಯ ಘಳಿಗೆಯಲ್ಲಿ ಸರ್ವರ್ ಡೌನ್/ಮಂದಗತಿ ಆಗುವ ಸಾಧ್ಯತೆ ಇರುವುದರಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಒಮ್ಮೆ ಶುಲ್ಕ ಪಾವತಿಸಿದ ನಂತರ ಯಾವುದೇ ಕಾರಣಕ್ಕೆ ಹಿಂದಿರುಗಿಸಲಾಗುವುದಿಲ್ಲ.

8) ಸೇವಾ ನಿರತ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡುವ "ನಿರಾಕ್ಷೇಪಣಾ ಪ್ರಮಾಣಪತ್ರ" ವನ್ನು ಪಡೆದುಕೊಂಡಿರತಕ್ಕದ್ದು.

9) ಆನ್‌ಲೈನ್ ಅರ್ಜಿಗಳನ್ನು ಹೊರತುಪಡಿಸಿ ಇತರ ಯಾವುದೇ ಮೂಲಕ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಇರುವುದಿಲ್ಲ.

**ಇತರೆ ಸೂಚನೆಗಳು:**

10) ಅರ್ಹತಾ ಪರೀಕ್ಷೆಗೆ/ಸಂದರ್ಶನದ ಸಮಯದಲ್ಲಿ ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು, ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ), ದ್ವಿತೀಯ ಪಿ.ಯು.ಸಿ, ಬೆರಳಚ್ಚು ಹಾಗು ಶೀಘ್ರಲಿಪಿ ಪರೀಕ್ಷೆಗಳ ಪ್ರಮಾಣ ಪತ್ರಗಳು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 371 (ಜೆ) ಪ್ರಮಾಣ ಪತ್ರ ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಅರ್ಜಿದಾರರು ಅರ್ಜಿಯಲ್ಲಿ ಸಲ್ಲಿಸಿದ ಮಾಹಿತಿಯು ಹಾಗು ದಾಖಲಾತಿಗಳು ಹೊಂದಾಣಿಕೆ ಆಗದಿದ್ದಲ್ಲಿ ಅಥವಾ ಸುಳ್ಳೆಂದು ಕಂಡು ಬಂದಲ್ಲಿ ಅವರ ಅಭ್ಯರ್ಥಿತನವನ್ನು ರದ್ದುಮಾಡಲಾಗುವುದು ಹಾಗು ಅವರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

11) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ, ಪ್ರವರ್ಗ-1 ಅಭ್ಯರ್ಥಿಗಳು ನಮೂನೆ 'ಇ'ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಪಟ್ಟ ತಹಸೀಲ್ದಾರರಿಂದ ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದು ಅರ್ಜಿ ಸಲ್ಲಿಸಬೇಕು.

12) ಕಲ್ಯಾಣ ಕರ್ನಾಟಕ ( ಸ್ಥಳೀಯ ವೃಂದ) ದ ಅಭ್ಯರ್ಥಿಗಳು 371(ಜೆ) 'ಅನುಬಂಧ ಎ' ಅರ್ಹತಾ ಪ್ರಮಾಣ ಪತ್ರವನ್ನು ಅರ್ಜಿಯನ್ನು ಸಲ್ಲಿಸಿದ ದಿನಾಂಕದಂದು ಅಥವಾ ಅದಕ್ಕೂ ಮುಂಚಿತವಾಗಿಯೇ ಸಕ್ಷಮ ಪ್ರಾಧಿಕಾರಿಗಳಿಂದ ಪಡೆದಿರತಕ್ಕದ್ದು.

13) ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು ) 1977 ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು ಹಾಗು ಕಂಪ್ಯೂಟರ್ ಸಾಕ್ಷಾರತಾ ಪರೀಕ್ಷೆಗಳಲ್ಲಿ ಸೇವೆಗೆ ಸೇರಿದ ಮೂರು ತಿಂಗಳ ಒಳಗಾಗಿ ಶೇಕಡಾ 60 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು ಉತ್ತೀರ್ಣರಾಗಬೇಕು.

14) ಎಲ್ಲಾ ಅರ್ಹ ಅಭ್ಯರ್ಥಿಗಳಿಗೂ ಅರ್ಹತಾ ಪರೀಕ್ಷೆ/ ಸ್ಕಿಲ್ ಟೆಸ್ಟ್ ನಡೆಸಲಾಗುವುದು (ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಅರ್ಹತಾ ಪರೀಕ್ಷೆಗೆ ಹಾಜರಾಗಬೇಕು). ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 5 ರಂತೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಯಾವುದೇ ಅಭ್ಯರ್ಥಿಗೆ ಅರ್ಹತಾ ಪರೀಕ್ಷೆ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಅರ್ಹತಾ ಪರೀಕ್ಷೆಗೆ ಅರ್ಹರಲ್ಲ ಎಂದು ತಿಳಿಯತಕ್ಕದ್ದು ಮತ್ತು ಆ ಬಗ್ಗೆ ಯಾವುದೇ ಪತ್ರ ವ್ಯವಹಾರ ಮಾಡಲಾಗುವುದಿಲ್ಲ.

15) ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು ಹಾಗು ಸಂದರ್ಶನದ ಕರೆ ಯಾವ ಅಭ್ಯರ್ಥಿಗಳಿಗೆ ಬರುವುದಿಲ್ಲವೋ ಅವರು ಸಂದರ್ಶನಕ್ಕೆ ಅರ್ಹರಾಗಿಲ್ಲ ಎಂದು ತಿಳಿದುಕೊಳ್ಳಬೇಕು ಮತ್ತು ಈ ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

16) ಆಯ್ಕೆಯ ಸಂಬಂಧ ಅನರ್ಹರಾದ ಅಭ್ಯರ್ಥಿಗಳು ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಅವಕಾಶ ಇರುವುದಿಲ್ಲ.

17) ನೇಮಕಾತಿಯು ಸಂಪೂರ್ಣ ಪಾರದರ್ಶಕತೆಯಿಂದ ಕೂಡಿದ್ದು ಅಭ್ಯರ್ಥಿಗಳು ಯಾವುದೇ ಮದ್ಯವರ್ತಿಗಳ ಸಂಪರ್ಕಕ್ಕೆ ಅವಕಾಶ ಇರುವುದಿಲ್ಲ.

18) ಯಾವುದೇ ಅಭ್ಯರ್ಥಿಗಳು ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸುವುದು ಕಂಡು ಬಂದಲ್ಲಿ ಅಂತಹವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು ಮತ್ತು ಕಾನೂನು ರೀತ್ಯ ಕ್ರಮ ಕೈಗೊಳ್ಳಲಾಗುವುದು.

VIJAYKUMR M ANANDASHETTI
Digitally signed by VIJAYKUMR M ANANDASHETTI
Date: 2023.11.07 17:44:03 +0530

ಸ್ಥಳ: ಬೀದರ
ದಿನಾಂಕ: 07/11/2023

(ವಿ.ಎಮ್. ಆನಂದಶೆಟ್ಟಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೀದರ

**<u>ನಕಲನ್ನು ಗೌರವದೊಂದಿಗೆ ಮಾಹಿತಿಗಾಗಿ:</u>**

ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಮುಖಪತ್ರದೊಂದಿಗೆ.

**<u>ಪ್ರಕಟಣೆಯ ನಕಲನ್ನು ಪ್ರಕಟಿಸುವ ಕುರಿತು:</u>**

1) ರಾಜ್ಯ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರುಗಳು ಇವರುಗಳಿಗೆ ಇ-ಮೇಲ್ ಮುಖಾಂತರ
2) ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬೀದರ

3) ನಿರ್ದೇಶಕರು, ವಾರ್ತಾ ಪ್ರಚಾರ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು, ಇವರಿಗೆ ಸಾದಿಲ್ವಾರು ವೆಚ್ಚ ಕೈಪಿಡಿ ನಿಯಮ 55 (ಬಿ) (ಡಿ) ಪ್ರಕಾರ ಹೆಚ್ಚು ಪ್ರಸಾರ ಉಳ್ಳ ಎರಡು ದಿನಪತ್ರಿಗಳಲ್ಲಿ ಉಚಿತವಾಗಿ ಪ್ರಕಟಿಸಿ ಪ್ರಕಟಣೆಯ 5 ಪ್ರತಿಗಳನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಲು ಕೋರಲಾಗಿದೆ.

4) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಸರಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು -560059, ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಹೊರಡಿಸಲು

5) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ ಅಧಿಕಾರಿಗಳು, ಬೀದರ, ವ್ಯಾಪಕ ಪ್ರಚಾರಕ್ಕಾಗಿ

6) ಜಿಲ್ಲಾಧಿಕಾರಿಗಳು, ಬೀದರ ಜಿಲ್ಲೆ, ಬೀದರ

7) ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೀದರ ಜಿಲ್ಲೆ, ಬೀದರ

8) ಜಿಲ್ಲಾ ಖಜಾನಾ ಅಧಿಕಾರಿಗಳು, ಬೀದರ ಜಿಲ್ಲೆ, ಬೀದರ

9) ಬೀದರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಪೀಠಾಸೀನಾಧಿಕಾರಿಗಳಿಗೆ,

10) ಸದಸ್ಯ ಕಾರ್ಯದರ್ಶಿಗಳು, ಡಿ.ಎಲ್.ಎಸ್.ಎ, ಬೀದರ ಇವರ ಮಾಹಿತಿ ಹಾಗು ರಾಜ್ಯ ಮಟ್ಟದ ಪ್ರಚಲಿತ ಯಾವುದಾದರೂ ಎರಡು ದಿನಪತ್ರಿಕೆಗಳಲ್ಲಿ ಸುದ್ದಿ ಪ್ರಕಟಣೆ ಮಾಡಲು ವ್ಯವಸ್ಥೆ ಮಾಡುವಂತೆ ಮನವಿ

11) ಈ ಕಚೇರಿಯ ಸಾಫ್ಟವೇರ್ ಟೆಕ್ನಿಷಿಯನ್ ಇವರಿಗೆ ಸೂಕ್ತ ಕ್ರಮಕ್ಕಾಗಿ,

12) ಈ ಕಚೇರಿಯ ಸೂಚನಾ ಫಲಕಕ್ಕೆ.

13) ಆಡಳಿತ ವಿಭಾಗದ ಕಡತಕ್ಕೆ.

14) ಕಚೇರಿ ಪ್ರತಿ.